ಆಗುತ್ತೆ. ಲಂಚ ಪಡೆದು ಸಿಕ್ಕಿಹಾಕಿಕೊಂಡ ಅಧಿಕಾರಿಗೆ ಹಿಂಬಡ್ತಿ ಶಿಕ್ಷೆ ನೀಡಿದ್ದನ್ನು ಪತ್ರಿಕೆಗಳಲ್ಲಿ ಆಗೀಗ ನೋಡುತ್ತಿರುತ್ತೇವೆ. ಬಡ್ತಿ ಎಂದರೆ ಪದೋನ್ನತಿ, ಮೇಲೇರಿಕೆ ಎನ್ನುವ ಅರ್ಥವಿದೆ. ಹಿಂಬಡ್ತಿ ಎಂದಾಗ ತಮ್ಮ ಸ್ಥಾನದಿಂದ ಕೆಳಗಿಳಿದರು ಎನ್ನುವುದು ಅಂಡರ್‌ಸ್ಟುಡ್!

ಹಿಂದೋಡುವ ಮನಸ್ಸು ಎಷ್ಟೊಂದು ಪ್ರಬಲವಾಗಿದೆಯೆಂದರೆ ಯಾರೇ ಆದರೂ ತಮ್ಮ ಬಾಲ್ಯ ಎಷ್ಟೊಂದು ಸುಂದರವಾಗಿತ್ತು ಎಂದೇ ಹಲುಬುತ್ತಾರೆ. ಕೈಗೆಟುಕದ ದ್ರಾಕ್ಷಿ ಹುಳಿ ಎನ್ನುವುದು ಸಾಮಾನ್ಯ ಉಕ್ತಿ. ಆದರೆ ಮರಳಿ ಪಡೆಯಲಾಗದ ಬಾಲ್ಯ ಮಧುರಾತಿ ಮಧುರ! ಹರಿವ ನದಿಗೆ ಅಣೆಕಟ್ಟನ್ನು ಅಡ್ಡಗಟ್ಟಿದಾಗ ಹಿನ್ನೀರು ಒತ್ತಡದಿಂದ ಹಿಮ್ಮುಖವಾಗಿ ನುಗ್ಗುವಂತೆ ಬದುಕು ಮುಂದಿನ ದಾರಿ ಕಾಣದೇ ತಟಸ್ಥವಾದಾಗ ಹಿಂದೋಡುವ ಮನಸ್ಸು ಹಿಂಡುಹಿಂಡು ನೆನಪುಗಳನ್ನು ಬಾಚಿಕೊಂಡು ತನ್ನದಾಗಿಸಿಕೊಳ್ಳುವ ತವಕದಲ್ಲಿ ತಬ್ಬಿ ಅವುಚಿಕೊಳ್ಳುತ್ತಿರುತ್ತದೆ. ಆದರೆ ಹಿಂದೆ ಹಿಂದೆ ಸರಿದಂತೆ ಎಲ್ಲವೂ ಮಾಸಲು ಮಾಸಲು! ನನ್ನಂಥ ಹಿರಿಜೀವಗಳು ಮಧ್ಯವಯ, ಯೌವನ, ಬಾಲ್ಯ ಮುಂತಾಗಿ ನೆನಪುಗಳನ್ನು ಆಯ್ದು ಹೆಕ್ಕಿಕೊಳ್ಳುತ್ತಾ ಹಿಂದೆ ಹಿಂದೆ ಸಾಗಬಹುದು. ಅಮ್ಮ ಅಜ್ಜಿ ಆಗಾಗ ಹೇಳಿ ಹೇಳಿ ಗಟ್ಟಿಗೊಳಿಸಿದ ಶೈಶವವನ್ನೂ ಕಣ್ಮುಂದೆ ಮೂರ್ತಿಕರಿಸಿಕೊಳ್ಳಲೂಬಹುದು. ಆದರೆ ಅದರ ಹಿಂದಿನ ಮಾತೃಗರ್ಭದೊಳಗಿನದು? ಅದಕ್ಕೂ ಹಿಂದೆ? ಇವೆಲ್ಲಾ ನಮ್ಮ ಮನೋಮಿತಿಗೂ ನಿಲುಕದ ನಿಗೂಢ ಸಂದರ್ಭಗಳು!

ಸದಾ ಹಿಂದೋಡಲೇ ಹವಣಿಸುತ್ತಿರುವ ಮನವನ್ನು ತಡೆಹಿಡಿಯದೆ ಒಮ್ಮೆ ನೆನಪೆಂಬ ತಾಂಬೂಲವನ್ನು ಜಗಿಯಲಾರಂಭಿಸಿದೆವೆಂದರೆ

'ಜಗಿಜಗಿದು
ಸ್ವಾದರಹಿತವಾಗಿದ್ದರೂ
ಈ ತಾಂಬೂಲವ
ಉಗಿಯಲಾಗದ
ವಿಚಿತ್ರ ಮೋಹ'

ಎನ್ನುವಂತೆ ಮೋಹಪಾಶಕ್ಕೆ ಬಂಧಿಯಾಗಿ ಆ ನೆನಪಿನ ಸುಳಿಯೊಳಗೇ ಸಿಲುಕಿಬಿಡುತ್ತೇವೆ!

ಹಾಗೆ ನೋಡಿದರೆ ಮನೆಯಲ್ಲಿರುವ ಅಜ್ಜಿಯರಿಂದಲೇ ಹಿಂದಿನ ಪೀಳಿಗೆಗಳ ರೋಚಕ ಕಥೆಗಳು ವಂಶಪಾರಂಪರ್ಯವಾಗಿ ಹರಿದು ಸಾಗುವುದು ಎನಿಸುತ್ತದೆ. ಈಗೀಗ ಟೀವಿ, ಮೊಬೈಲ್‌ಗಳ ಸಾಂಗತ್ಯದಲ್ಲಿ ಹೇಳಲೂ ಕೇಳಲೂ ಸಮಯವೇ ಇಲ್ಲದಂತಾಗಿಬಿಟ್ಟಿದೆ. ನಾವು ಚಿಕ್ಕವರಿದ್ದಾಗ ನಮ್ಮ ಮುತ್ತಜ್ಜಿ ಸದಾ ಕಾಲ ತಮ್ಮ ಹಿಂದಿನ ತಲೆಮಾರಿನವರ ಬಗ್ಗೆ ಹೇಳುತ್ತಲೇ ಇರುತ್ತಿದ್ದರು. ಅವರ ಮುತ್ತಜ್ಜಿಗೆ ಮೂಗು ಚುಚ್ಚಿದ್ದು (ಆಗ ಏಳೆಂಟು ವರ್ಷಕ್ಕೆಲ್ಲಾ ಮದುವೆ ಮಾಡ್ತಿದ್ದರಲ್ಲ. ಅದಕ್ಕೂ ಮೊದಲೇ ಮೂಗು ಬಲಿತರೆ ಚುಚ್ಚಕ್ಕಾಗಲ್ಲ ಅಂತ ಹೆದರಿ ಓಡಿಹೋಗ್ತಿದ್ದ ಮಗೂನ ಬೆಲ್ಲದ ಆಸೆ ತೋರಿಸಿ ಎತ್ತಿಕೊಂಡು ಬಂದು ಮೂಗು ಚುಚ್ಚಿಸಿದ್ದಂತೆ!), ಕೋಪ ಬಂದಾಗಲೆಲ್ಲಾ ಅವರ ಮುತ್ತಾತ ತೆಂಗಿನ ಮರ ಹತ್ತಿ ಕೂರ್ತಿದ್ದದ್ದು, ಅವರ ತಾತನ ಬಾಲಲೀಲೆಗಳು, ಮಹಾನ್ ಸಿದ್ಧಾಂತಿಗಳಾಗಿದ್ದ ಅವರ ಮರಿತಾತನ ಮಾತೇ ಊರಿನಲ್ಲಿ ನಡೀತಿದ್ದದ್ದು... ಕೊನೆ ಮೊದಲೇ ಇಲ್ಲ. ಯಾರು ಕೇಳಲಿ ಬಿಡಲಿ 'ಮಾತಾಡುವುದೆ ಅನಿವಾರ್ಯ ಕರ್ಮ ನನಗೆ' ಎನ್ನುವಂತೆ ಅವರ ವಾಕ್ಪ್ರವಾಹ ಅಡೆತಡೆ ಇಲ್ಲದಂತೆ ಹರಿಯುತ್ತಿತ್ತು. ನಮಗೋ ಸದಾ ತಲೆ ನಡುಗಿಸುತ್ತಿದ್ದ ನೂರರ ಸಮೀಪದ ಮುತ್ತಜ್ಜಿ ತಮ್ಮ ತಾತನ ಬಾಲಲೀಲೆಗಳನ್ನು ಹೇಳುವಾಗ ನಗುವನ್ನೇ ತಡೆಯಲಾಗುತ್ತಿರಲಿಲ್ಲ.

ಕೇವಲ ಈ ರೀತಿಯ ಕಪೋಲ ಕಲ್ಪಿತವೇನೋ ಎನಿಸುವಂಥ ಆಕರ್ಷಕ ಕಥಾನಕಗಳಷ್ಟೇ ಅಲ್ಲ. ಅವರ ಅಮೂಲ್ಯ ಅನುಭವಗಳು, ಮನೆಮದ್ದುಗಳು ಎಷ್ಟೋ ವೇಳೆ ಉಪಯುಕ್ತವೂ ಆಗಿರುತ್ತಿದ್ದವು. ಈಗೆಲ್ಲಾ ನ್ಯೂಕ್ಲಿಯರ್ ಫ್ಯಾಮಿಲಿಗಳೇ ಹೆಚ್ಚಾಗಿ ಮಕ್ಕಳಿಗೆ ಅಜ್ಜಿ–ಅಜ್ಜನ ಸಾಂಗತ್ಯವೇ ಇಲ್ಲದಂತಾಗಿದೆ. ಅದರಲ್ಲೂ ಅತ್ತಿತ್ತ ಕತ್ತನ್ನೂ ಹೊರಳಿಸಲಾಗದಂತೆ ಕಾರ್ಯತತ್ಪರರಾದ ಯುವಜನತೆಗೆ ನೆಟ್ಟ ದೃಷ್ಟಿಗೆ ದಕ್ಕುವಷ್ಟೇ ಇಹಬಂಧೀ ತಾಂತ್ರಿಕತೆಯಾಗಿ ನೆನಪುಗಳೂ ಯಾಂತ್ರಿಕವಾಗುತ್ತಿವೆ. ನಮ್ಮ ನೆನಪುಗಳ ವ್ಯಾಪ್ತಿ ಎಷ್ಟೆಷ್ಟೋ ಗತಜನ್ಮದ ಸ್ಮೃತಿಗಳ ಹಂದರವಾದರೂ ಅರಿವಿಲ್ಲದೇ ಇಷ್ಟೇ ಬದುಕೆಂಬಂತೆ ಇಲ್ಲಿಗೇ ಅಂಟಿ ಹೊರಳುವ ಹುಳುವಾಗಿರುವ ನಮಗೆ ಪೂರ್ವ ಸ್ಮರಣೆಯದೇ ಅಭಾವವಾಗಿದೆ.

ಹಿಂದೆ ಹಿಂದೆ ಸಾಗುತ್ತಾ ಓಡಲಾರಂಭಿಸಿದ ಈ ಓಟ ಎತ್ತೆತ್ತಲೋ ಎಲ್ಲೆಲ್ಲೋ ನಮ್ಮನ್ನು ಕೊಂಡೊಯ್ಯಲಾರಂಭಿಸಿದೆ. 'ಎಷ್ಟಾದರೂ ಓಡಲಿ, ಕಾಸು ಖರ್ಚಿಲ್ಲದ ಓಟ' ಎಂದು ಸುಮ್ಮನಿದ್ದುಬಿಡಲಾಗುವುದೇ? ಮುಂದಿನ ಮಹೋನ್ನತದತ್ತ ಅದನ್ನು ಕೇಂದ್ರೀಕರಿಸಿದರೆ ಹೇಗೋ 'ಇಹಕ್ಕೆ ಸುಖ, ಪರಕ್ಕೆ ಗತಿ' ಅಂದುಕೊಳ್ಳೋಣವೇ?

ಪ್ರತಿಕ್ರಿಯಿಸಿ: **feedback@sudha.co.in**

